**ಹೆಚ್ಚುವರಿ ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ, ಹಾನಗಲ್**

**ಸಿ.ಸಿ ನಂ.975/2021**

| | | | | |
|---|---|---|---|---|
| ಸಾಕ್ಷಿದಾರರ ಹೆಸರು | : | ಬಸವಣ್ಣೆಪ್ಪ ಭರಮಪ್ಪ ನಚ್ಚಿಕಟ್ಟಿ | ಪಿಡಬ್ಲ್ಯೂ | 2 |
| ತಂದೆ:ಗಂಡನ ಹೆಸರು | : | ಭರಮಪ್ಪ | ಸಿಡಬ್ಲ್ಯೂ | 3 |
| ವಯಸ್ಸು | : | 78 ವರ್ಷ | | |
| ಉದ್ಯೋಗ | : | ವ್ಯವಸಾಯ | | |
| ವಾಸ ಸ್ಥಳ | : | ಶ್ಯಾಡಗುಪ್ಪಿ | | |

**ದಿನಾಂಕ:29-03-2023 ರಂದು ಸಾಕ್ಷಿದಾರರನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ: ಸಹಾಯಕ ಸರಕಾರಿ ಅಭಿಯೋಜಕರಿಂದ:**

ಈಗ ತೋರುತ್ತಿರುವ ಸ್ಥಳ ಪಂಚನಾಮೆಯಲ್ಲಿರುವ ಸಹಿ ನನ್ನದಾಗಿರುತ್ತದೆ. ಅದು ನಿಪಿ.1 ಎಂದು, ಸದರಿಯವರ ಸಹಿಯನ್ನು ನಿಪಿ.1(ಬಿ) ಎಂದು ಗುರುತಿಸಲಾಯಿತು. ಅದಕ್ಕೆ ನಾನು ಕಳೆದ ಮೂರು ವರ್ಷಗಳ ಹಿಂದೆ ಸಹಿ ಮಾಡಿರುತ್ತೇನೆ. ಅದಕ್ಕೆ ನಾನು ರಸ್ತೆಯಲ್ಲಿ ಸಹಿ ಮಾಡಿರುತ್ತೇನೆ. ನನ್ನನ್ನು ಯಾರು ಕರೆಸಿದರು ಎಂಬುದು ನನಗೆ ಗೊತ್ತಿಲ್ಲ. ಆ ದಿನ ಪೊಲೀಸರು ನನ್ನ ಪೋಟೋ ತೆಗೆದರು. ಆ ಪೋಟೋವನ್ನು ಈಗಾಗಲೇ ನಿಪಿ 2 ಎಂದು ಗುರುತಿಸಲಾಗಿದೆ.

**(ಈ ಹಂತದಲ್ಲಿ ಮಾನ್ಯ ಎಪಿಪಿ ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತಾ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದರು. ಅನುಮತಿ ನೀಡಲಾಗಿದೆ)**

**ಪಾಟೀ ಸವಾಲು: ಸಹಾಯಕ ಸರಕಾರಿ ಅಭಿಯೋಜಕರಿಂದ**

ದಿ:22-09-2019 ರಂದು ಬೆಳಿಗ್ಗೆ 11.00 ರಿಂದ 12.00 ಗಂಟೆ ಸಮಯದಲ್ಲಿ ಪೊಲೀಸರು ನನ್ನ ಮತ್ತು ಚಾಸಾ-2 ರವರ ಸಮಕ್ಷಮ ಈ ಗಲಾಟೆಗೆ ಸಂಬಂದಪಟ್ಟಂತೆ ಚಾಸಾ-1 ರವರು ಸ್ಥಳ ತೋರಿಸಿದ ಮೇರೆಗೆ ನಿ ಪಿ 1 ರಂತಹ ಸ್ಥಳ ಪಂಚನಾಮೆ ಬರೆದರು

ಎಂದರೆ ಸರಿ. ಆ ಸಂದರ್ಭದಲ್ಲಿ ಪೊಲೀಸರು ನಿ ಪಿ 2 ರಂತಹ ಪೋಟೋ ತೆಗೆದರು ಎಂದರೆ ಸರಿ.

**:ಪಾಟೀ ಸವಾಲು: ಆರೋಪಿ ಪರ ಶ್ರೀ.ಎಸ್ ವಿ ಎಂ ವಕೀಲರಿಂದ:**

ಆ ಸ್ಥಳ ಪಂಚನಾಮೆಯಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ಅದರಲ್ಲಿ ಬರೆದಿರುವ ವಿಚಾರವನ್ನು ನನಗೆ ಯಾರೂ ಸಹ ಓದಿ ಹೇಳಿರುವುದಿಲ್ಲ. ಆ ದಿನ ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಮತ್ತು ಪೋಟೋ ತೆಗೆದಿಲ್ಲ ಎಂದರೆ ಸರಿಯಲ್ಲ. ನಿ ಪಿ 2 ರಂತಹ ಪೋಟೋವನ್ನು ಯಾವ ಸರ್ವೇ ನಂಬರ ಜಮೀನಿನಲ್ಲಿ ತೆಗೆದರು ಎಂಬುದು ನನಗೆ ಗೊತ್ತಿಲ್ಲ. ನಿ ಪಿ 2 ರಂತಹ ಪೋಟೋ ತೆಗೆದ ಸ್ಥಳಕ್ಕೆ ಸಂಬಂದಪಟ್ಟಂತೆ ನನ್ನ ತಮ್ಮ ಬಸವರಾಜ ಆರೋಪಿತರ ವಿರುದ್ಧ ಹಾನಗಲ್ಲನ ಸಿವಿಲ್ ನ್ಯಾಯಾಲಯದಲ್ಲಿ ಒಂದು ದಾವೆ ಸಲ್ಲಿಸಿದ್ದಾರೆ ಎಂದರೆ ನನಗೆ ಗೊತ್ತಿಲ್ಲ. ನಾನು ನನ್ನ ತಮ್ಮನಿಗೆ ಸಹಾಯ ಮಾಡಲು ಆ ದಿನ ಪೊಲೀಸರು ಸ್ಥಳಕ್ಕೆ ಬಂದು ಸ್ಥಳ ಪಂಚನಾಮೆ ಮಾಡಿ ಪೋಟೋ ತೆಗೆದರು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಆ ಸಂದರ್ಭದಲ್ಲಿ ಸ್ಥಳ ಪಂಚನಾಮೆಗೆ ನನ್ನನ್ನು ಹೊರತುಪಡಿಸಿ ಬೇರೆ ಯಾರು ಸಹಿ ಮಾಡಿದರು ಎಂಬುದು ನನಗೆ ಗೊತ್ತಿಲ್ಲ. ಆ ಸ್ಥಳ ಪಂಚನಾಮೆಯನ್ನು ಯಾರು ಬರೆದರು ಎಂಬುದು ನನಗೆ ಗೊತ್ತಿಲ್ಲ.

**ಮರುವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೆ ಸರಿ ಇದೆ
ಎಂದು ಒಪ್ಪಿರುತ್ತಾರೆ.

ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು
ಸಾಕ್ಷಿಧಾರರ ಸಹಿ ಮತ್ತು ಜೆ.ಎಂ.ಎಫ್.ಸಿ, ಹಾನಗಲ್